ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacntsenmms@gmail.com

ಸಂಖ್ಯೆ: ಕೆ3/ NTSE-NMMS ಪರೀಕ್ಷೆ/10/2021–22

ದಿನಾಂಕ: 29.11.2021

# ಜ್ಞಾಪನ

ವಿಷಯ:– 2021–22 ನೇ ಸಾಲಿನಲ್ಲಿ ನಡೆಸಲಿರುವ NTS ಪರೀಕ್ಷೆಗೆ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:–
1. NCERT ನವದೆಹಲಿ ರವರ ಪತ್ರ ಸಂಖ್ಯೆ: F1-11/2021/ESD/NTS-I/, Dated 10.09.2021
2. ಮಾನ್ಯ ಆಯುಕ್ತರು.ಸಾ.ಶಿ.ಇ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿ ದಿನಾಂಕ: 28.10.2021
3. ಮಾನ್ಯ ಆಯುಕ್ತರು.ಸಾ.ಶಿ.ಇ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ zoom app ಮೂಲಕ ನಡೆದ ಸಭೆಯ ನಡಾವಳಿ ದಿನಾಂಕ: 23.11.2021
4. ಈ ಕಛೇರಿ ಸುತ್ತೋಲೆ ಸಂಖ್ಯೆ: ಕೆ3/NTSE-NMMSಪರೀಕ್ಷೆ/10/2021–22, ದಿನಾಂಕ: 08.11.2021
5. ಕೆ2/NTS OMR e tender/04/2021–22, ದಿನಾಂಕ: 26.11.2021, ಕಂಡಿಕೆ 20 ರಲ್ಲಿನ ಮಾನ್ಯ ಆಯುಕ್ತರ ಅನುಮೋದನೆಯನ್ವಯ.

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರನ್ವಯ 2021–22ನೇ ಸಾಲಿನ NTS ಪರೀಕ್ಷೆಯನ್ನು ದಿನಾಂಕ: 16.01.2022 ರಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗೆ https://sslc.karnataka.gov.in/ ವೆಬ್‌ಸೈಟ್‌ನಲ್ಲಿ ದಿನಾಂಕ: **11.11.2021** ರಿಂದ ದಿನಾಂಕ: **30.11.2021** ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಈ ಹಿಂದಿನ ತರಗತಿ ಅಂದರೆ 9ನೇ ತರಗತಿಯಲ್ಲಿ A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳ ಅರ್ಜಿಗಳನ್ನು ಆಯಾ ಶಾಲಾ ಮುಖ್ಯ ಶಿಕ್ಷಕರು ಕಡ್ಡಾಯವಾಗಿ ಸಲ್ಲಿಸಲು ಅಗತ್ಯ ಕ್ರಮವಹಿಸುವಂತೆ ಉಲ್ಲೇಖ (2), (3) ಮತ್ತು (4) ರಲ್ಲಿ ತಿಳಿಸಲಾಗಿತ್ತು. ಅದರಂತೆ A+ ಮತ್ತು A ಗ್ರೇಡ್ ಪಡೆದಿರುವ ವಿದ್ಯಾರ್ಥಿಗಳ ಮಾಹಿತಿಯನ್ನು (ಜಿಲ್ಲಾವಾರು, ಬ್ಲಾಕ್‌ವಾರು, ಶಾಲಾವಾರು) ಮುಂದಿನ ಕ್ರಮಕ್ಕಾಗಿ ದಿನಾಂಕ: 23.11.2021 ರಂದು ಕಳುಹಿಸಲಾಗಿದೆ.

ಶಾಲಾ ಮುಖ್ಯ ಶಿಕ್ಷಕರು ಹಾಗೂ ಪೋಷಕರ ಕೋರಿಕೆಯ ಮೇರೆಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು ಉಲ್ಲೇಖ (5) ರ ಮಾನ್ಯ ಆಯುಕ್ತರ ಅನುಮತಿಯಂತೆ ದಿನಾಂಕ: 10.12.2021 ರವರೆಗೆ ವಿಸ್ತರಿಸಲಾಗಿದೆ. ಇದರ ಸದುಪಯೋಗವನ್ನು ಪಡೆದು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳ ಅರ್ಜಿ ಸಲ್ಲಿಸಲು ಇಲಾಖಾ ಅಧಿಕಾರಿಗಳು ಮತ್ತು ಶಾಲಾ ಮುಖ್ಯ ಶಿಕ್ಷಕರು ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಿದೆ. ವಿಶೇಷವಾಗಿ ಖಾಸಗಿ ಅನುದಾನ ರಹಿತ ಶಾಲೆಗಳ (CBSE / ICSE) ಮುಖ್ಯ ಶಿಕ್ಷಕರು NTS ಪರೀಕ್ಷೆಗೆ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳಿಗೆ ಅವಕಾಶ ನೀಡದಿರುವ ಕುರಿತು ಪೋಷಕರಿಂದ ದೂರುಗಳು ಬರುತ್ತಿದ್ದು, ಯಾವುದೇ ಪ್ರತಿಭಾವಂತ ಹಾಗೂ ಆಸಕ್ತ ವಿದ್ಯಾರ್ಥಿಗಳು NTS ಪರೀಕ್ಷೆಯಿಂದ ವಂಚಿತರಾಗದಂತೆ ಕ್ರಮವಹಿಸುವುದು. ಈಗಾಗಲೇ ತಿಳಿಸಿದಂತೆ A+ ಮತ್ತು A ಗ್ರೇಡ್ ಪಡೆದಿರುವ ವಿದ್ಯಾರ್ಥಿಗಳು, ಇನ್ನುಳಿದ ಆಸಕ್ತ ಮತ್ತು ಅರ್ಹ ವಿದ್ಯಾರ್ಥಿಗಳು NTS ಪರೀಕ್ಷೆಯಿಂದ ವಂಚಿತರಾದಲ್ಲಿ ಸಂಬಂಧಪಟ್ಟವರ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು.

29/11/21
ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
2. NTS ಪರೀಕ್ಷಾ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ.
3. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
5. ಕಛೇರಿ ಪ್ರತಿ.

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ.**

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ರವರಿಗೆ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ.